OS No.90/2020

PW-3 ಈರಣ್ಣ

Date: 06.08.2025

**<u>ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಪಾಟೀ ಸವಾಲು 1 ನೇ ಪ್ರತಿವಾದಿ ಪರ ಶ್ರೀಮತಿ ಬಿ ಟಿ ಎಸ್ ವಕೀಲರಿಂದಃ</u>**

ಯಾರು ಯಾರ ಮೇಲೆ ಈ ದಾವೆಯನ್ನು ಹೂಡಿದ್ದಾರೆ ಎನ್ನುವ ಬಗ್ಗೆ ನನಗೆ ಮಾಹಿತಿ ಇಲ್ಲ. ಜಮೀನಿನ ವಿಚಾರವಾಗಿ ಈ ದಾವೆಯನ್ನು ಹೂಡಿದ್ದಾರೆ. ಏನ ಪರಿಹಾರ ಕೇಳಿದ್ದಾರೆ ಎಂದು ನನಗೆ ಗೊತ್ತಿಲ್ಲ. ಮುಖ್ಯ ವಿಚಾರಣೆ ಪ್ರಮಾಣ ಪತ್ರದಲ್ಲಿ ಬರೆದಿರುವ ಅಂಶವನ್ನು ನಾನು ತಿಳಿದುಕೊಂಡಿರುವುದಿಲ್ಲ. ನಾನು ತಿಪ್ಪೇಸ್ವಾಮಿ ರವರಿಗೆ ಸೇರಿದ ಜಮೀನಿನಲ್ಲಿಯೇ ವಾಸವಾಗಿದ್ದೇನೆ ಎಂದರೆ ಸರಿ. ಸನಂ.25 ಒಟ್ಟು ಎಷ್ಟು ಎಕರೆ ಇದೆ ಎಂದು ನನಗೆ ಗೊತ್ತಿಲ್ಲ. ಸದರಿ ಜಮೀನಿನಲ್ಲಿ ಯಾರು ಯಾರು ಎಷ್ಟು ಎಕರೆ ಜಮೀನಿನಲ್ಲಿ ಸ್ವಾಧೀನವನ್ನು ಹೊಂದಿದ್ದಾರೆ ಎಂದು ನನಗೆ ಗೊತ್ತಿಲ್ಲ. ತಿಪ್ಪೇಸ್ವಾಮಿ ರವರ ತಂದೆಗೆ ಸೇರಿದ ಎಷ್ಟು ಎಕರೆ ಜಮೀನು ಇತ್ತು ಎಂದು ನನಗೆ ಗೊತ್ತಿಲ್ಲ. ಹನುಮಣ್ಣ ರವರಿಗೂ ಕೂಡ ಎಷ್ಟು ಎಕರೆ ಜಮೀನು ಇದೆ ಎನ್ನುವ ಬಗ್ಗೆ ನನಗೆ ಮಾಹಿತಿ ಇಲ್ಲ. ಆದರೆ ಅವರು ಉಳುಮೆ ಮಾಡುತ್ತಿದ್ದ ಬಗ್ಗೆ ಮಾತ್ರ ಮಾಹಿತಿ ಇರುತ್ತದೆ. ಸನಂ.25 ರಲ್ಲಿ 1 ನೇ ಪ್ರತಿವಾದಿಗೆ ಎಷ್ಟು ಎಕರೆ ಜಮೀನು ಇದೆ ಮತ್ತು ಅವರಿಗೆ ಸ್ವಾಧೀನ ಹೇಗೆ ಬಂದಿತ್ತು ಎನ್ನುವ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿ. 2 ನೇ ಪ್ರತಿವಾದಿಗೆ ಎಷ್ಟು ಎಕರೆ ಜಮೀನು ಇದೆ ಎನ್ನುವ ಬಗ್ಗೆಯೂ ಕೂಡ ನನಗೆ ಮಾಹಿತಿ ಇಲ್ಲ. 3 ನೇ ಪ್ರತಿವಾದಿಯ ಹೆಂಡತಿಗೂ ಕೂಡ ಎಷ್ಟು ಎಕರೆ ಜಮೀನಿನಲ್ಲಿ ಸ್ವಾಧಿನದಲ್ಲಿದ್ದಾರೆ ಎನ್ನುವ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿ. ಅದೇ ರೀತಿ 4 ನೇ ಪ್ರತಿವಾದಿ ಮಂಜಣ್ಣ ರವರು ಎಷ್ಟು ಎಕರೆ ಜಮೀನಿನಲ್ಲಿ ಯಾವ ರೀತಿ ಸ್ವಾಧೀನವನ್ನು ಹೊಂದಿದ್ದಾರೆ ಎನ್ನುವ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿ. ತಿಪ್ಪೇಸ್ವಾಮಿ ಮತ್ತು ಪಾರ್ವತಮ್ಮ ರವರ ಜಮೀನಿನ ಮಧ್ಯೆ ಏರಿ ಇದೆ ಎಂದು ನಾನು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅದು ಎಷ್ಟು ಉದ್ದ ಇದೆ ಮತ್ತು ಎಷ್ಟು ಅಗಲ ಇದೆ ಎನ್ನುವ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿ. ಸದರಿ ಏರಿ ಯಾವ ಯಾವ ಜಮೀನಿನ ಮೂಲಕ ಹಾದು ಹೋಗುತ್ತದೆ ಎನ್ನುವ ಬಗ್ಗೆ ನನಗೆ ಮಾಹಿತಿ ಇಲ್ಲ.

ನನಗೆ ದಾವಾ ಸ್ವತ್ತುಗಳ ಬಗ್ಗೆ ಯಾವುದೇ ಮಾಹಿತಿ ಇರದೇ ಇದ್ದರೂ ಕೂಡ ನಾನು ವಾದಿಯ ಮಾತನ್ನು ಕೇಳಿ ಸುಳ್ಳು ಸಾಕ್ಷ್ಯವನ್ನು ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನಾನು ನ್ಯಾಯಾಲಯಕ್ಕೆ ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

**6 ನೇ ಪ್ರತಿವಾದಿ ಪರ ಯಾವುದೇ ಪಾಟೀ ಸವಾಲು ಇರುವುದಿಲ್ಲ.**

**ಮರು ವಿಚಾರಣೆಃ ಇರುವುದಿಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ. ಸರಿ ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಚಳ್ಳಕೆರೆ